ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ  ನ್ಯಾಯಾಲಯ

ಸಿದ್ದಾಪುರ

ಸಿ.ಸಿ. 107/2024

| | |
|---|---|
| ಸಿ.ಡಬ್ಲ್ಯೂಃ | 15 |
| ಪಿ.ಡಬ್ಲ್ಯೂಃ | 10 |

| | | |
|---|---|---|
| **ಸಾಕ್ಷಿದಾರರ ಹೆಸರು** | ಃ | ಅನಿಲ್ ಬಿ |
| ತಂದೆ ಹೆಸರು | ಃ | ಬಸಪ್ಪ |
| ವಯಸ್ಸು | ಃ | 35 ವರ್ಷ |
| ವೃತ್ತಿ | ಃ | ಪಿ ಎಸ್ ಐ , ಗೋಕರ್ಣ ಪೊಲೀಸ್ ಠಾಣೆ |
| ವಾಸ | ಃ | ಗೋಕರ್ಣ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 13–08–2026**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ**

ನಾನು  ಜುಲೈ 2023 ರಿಂದ ಜುಲೈ 2025 ರವರೆಗೆ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ  ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ 02-03-2024 ರಂದು  ನಾನು ಚಾಸಾ-14 ರವರಿಂದ ಕಡತವನ್ನು ಪಡೆದುಕೊಂಡು ಪರೀಶಿಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ.

ನಂತರ ಅದೇ ದಿನ ಚಾಸಾ-4 ರಿಂದ 9 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.  ಸಾಕ್ಷಿಗೆ ಈಗ ಚಾಸಾ-4 ರವರ  ಹೇಳಿಕೆಯನ್ನು  ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ನಿಪಿ. 8 ಎಂದು ಗುರುತಿಸಿದ್ದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-8(ಬಿ ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ  ಚಾಸಾ-5 ರವರ   ಹೇಳಿಕೆಯನ್ನು  ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು  ಈಗಾಗಲೆ ನಿಪಿ. 9 ಎಂದು ಗುರುತಿಸಿದ್ದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-9(ಬಿ ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ ಚಾಸಾ-6 ರವರ ಹೇಳಿಕೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ನಿಪಿ. 11 ಎಂದು ಗುರುತಿಸಿದ್ದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-11(ಬಿ ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ ಚಾಸಾ-7 ರವರ ಹೇಳಿಕೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ನಿಪಿ. 10 ಎಂದು ಗುರುತಿಸಿದ್ದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-10(ಬಿ ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ ಚಾಸಾ-8 ರವರ ಹೇಳಿಕೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ನಿಪಿ. 12 ಎಂದು ಗುರುತಿಸಿದ್ದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-12(ಬಿ ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈಗ ಚಾಸಾ-9 ರವರ ಹೇಳಿಕೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ. 17 ಎಂದು ಗುರುತಿಸಿದ್ದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-17(ಎ ) ಎಂದು ಗುರುತಿಸಲಾಯಿತು.

ದಿಃ 03-03-2024 ರಂದು ಈ ಪ್ರಕರಣದ 1 ರಿಂದ 6 ನೇ ಆರೋಪಿತರಿಗೆ ಠಾಣೆಗೆ ಹಾಜರಾಗುವಂತೆ ಅಪರಾಧ ಪ್ರಕ್ರಿಯಾ ಸಂಹಿತೆ ಕಲಂ 41 ರಂತೆ ನೋಟೀಸನ್ನು ನೀಡಿರುತ್ತೇನೆ.

ಸಾಕ್ಷಿಗೆ ಈಗ ಆರು ನೋಟೀಸಗಳನ್ನು ತೋರಿಸಿದ್ದು ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.18 ರಿಂದ ನಿ.ಪಿ- 23 ಎಂದು, ಅವುಗಳಲ್ಲಿರುವ ಇರುವ ಸಾಕ್ಷಿಯ ಸಹಿಯನ್ನು ಕ್ರಮವಾಗಿ ನಿಪಿ-18(ಎ) ರಿಂದ ನಿಪಿ-23(ಎ) ಎಂದು ಗುರುತಿಸಲಾಯಿತು.

ನಂತರ ಅದೇ ದಿನ ಚಾಸಾ-1 ರವರ ಗಾಯದ ಪ್ರಮಾಣ ನೀಡುವಂತೆ ಸಿದ್ದಾಪುರ ಸರ್ಕಾರಿ ಆಸ್ಪತ್ರೆಗೆ ನಿವೇದನಾ ಪತ್ರವನ್ನು ನೀಡಿರುತ್ತೇನೆ.

ಸಾಕ್ಷಿಗೆ ಈಗ ನಿವೇದನಾ ಪತ್ರವನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.24 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-24(ಎ) ಎಂದು ಗುರುತಿಸಲಾಯಿತು.

ನಂತರ ದಿನಾಂಕಃ 11-03-2024 ರಂದು ಚಾಸಾ-11 ರವರು ನ್ಯಾಯಾಲಯಕ್ಕೆ ಪ್ರ.ವ.ವರದಿಯನ್ನು ನೀಡಿರುವ ಬಗ್ಗೆ ವರದಿಯನ್ನು ನೀಡಿದ್ದು, ಅದನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಈಗ ಸದರಿ ವರದಿಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.25 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-25(ಎ) ಎಂದು ಗುರುತಿಸಲಾಯಿತು.

ನಂತರ ಅದೇ ದಿನ ಚಾಸಾ-12 ರವರು ತನಿಖೆಗೆ ಸಹಕರಿಸಿದ ಬಗ್ಗೆ ವರದಿಯನ್ನು ನೀಡಿದ್ದು, ಅದನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಈಗ ಸದ್ರಿ ವರದಿಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.26 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-26(ಎ) ಎಂದು ಗುರುತಿಸಲಾಯಿತು.

ನಂತರ ಅದೇ ದಿನ ಚಾಸಾ-13 ರವರು ಭಾರತೀಯ ಸಾಕ್ಷ್ಯ ಅಧಿನಿಯಮ ಕಲಂ 65(ಬಿ) ನಂತೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಈಗ ಸದ್ರಿ ಪ್ರಮಾಣ ಪತ್ರವನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.27 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-27(ಎ) ಎಂದು ಗುರುತಿಸಲಾಯಿತು.

ನಂತರ ದಿಃ 14-03-2024 ರಂದು ಸರ್ಕಾರಿ ಆಸ್ಪತ್ರೆ ವೈದ್ಯರು ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಈಗ ಗಾಯದ ಪ್ರಮಾಣ ಪತ್ರವನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ.13 ಎಂದು, ಗುರುತಿಸಿದ್ದು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು.

ನಂತರ ದಿಃ 25-03-2024 ರಂದು ತನಿಖೆಯನ್ನು ಪೂರ್ಣಗೊಳಿಸಿದ್ದು ಆರೋಪಿತರ ವಿರುದ್ಧ ಆರೋಪ ಸಾಬೀತಾದ ಕಾರಣ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣಾ ಪತ್ರವನ್ನು ಸಲ್ಲಿಸಿರುತ್ತೇನೆ.

ನ್ಯಾಯಾಲಯದ ಮುಂದೆ ಇರುವ 1 ನೇ ಆರೋಪಿಯನ್ನು ಸಾಕ್ಷಿಗೆ ತೋರಿಸಿದ್ದು, ಸಾಕ್ಷಿಯು ಅವರನ್ನು ನೋಡಿ ಗುರುತಿಸಿರುತ್ತಾರೆ.

**(**ಉಳಿದ ಆರೋಪಿತರ ಗುರುತಿಸುವಿಕೆಗೆ ಆರೋಪಿತರ ವಕೀಲರು ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ**)**

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ**

ನಾನು ಯಾವುದೇ ಸಾಕ್ಷಿದಾರರು ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ, ನಾನು ಆರೋಪಿತರಿಗೆ ಯಾವುದೇ ನೋಟೀಸನ್ನು ನೀಡಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಸಂಬಂದಿಸಿದಂತೆ ನಾನು ಯಾವುದೇ ವರದಿಗಳನ್ನು ಹಾಗೂ ದಾಖಲೆಗಳನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತನಿಖೆಯ ಅವಧಿಯಲ್ಲಿ ಆರೋಪಿತರ

ವಿರುದ್ಧ ಆರೋಪ ಸಾಬೀತಾಗದೇ ಇದ್ದರು ಸಹ ಸುಳ್ಳು ದೋಷರೋಪಣಾ ಪತ್ರವನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**( ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಸಾ.ಓ.ಹೇ.ಸ.ಒ**

ಸಹಿ ಇದೆ/-

**ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ**

**ಸಿದ್ದಾಪುರ**